ಕರ್ನಾಟಕ ವಿಧಾನ ಪರಿಷತ್ತು

1.	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	55
2.	ಸದಸ್ಯರ ಹೆಸರು	:	ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ
3.	ಉತ್ತರಿಸಬೇಕಾದ ದಿನಾಂಕ	:	21.09.2020
4.	ಉತ್ತರಿಸಬೇಕಾದ ಸಚಿವರು	:	ವೈದ್ಯಕೀಯ ಶಿಕ್ಷಣ ಸಚಿವರು

ಕ್ರ. ಸಂ.	ಪ್ರಶ್ನೆಗಳು	ಉತ್ತರಗಳು
ಅ)	ಕೋವಿಡ್-19ರ ರೋಗ ಹರಡುವಿಕೆಯು ಪ್ರಾರಂಭಗೊಂಡ ದಿನಾಂಕ:23.03.2020 ರಿಂದ ಇಲ್ಲಿಯವರೆಗೆ ವೈದ್ಯಕೀಯ ಶಿಕ್ಷಣ ಇಲಾಖೆಯ ಅಧೀನದ ಸರ್ಕಾರಿ ಕಾಲೇಜು/ಆಸ್ಪತ್ರೆಗಳು ಯಾವುವು; ಅವುಗಳ ಮೂಲಭೂತ ಸೌಕರ್ಯಕ್ಕಾಗಿ ಮಂಜೂರು ಮಾಡಲಾದ ಅನುದಾನ ಎಷ್ಟು; ವೆಚ್ಚ ಮಾಡಲಾದ ಅನುದಾನ ಎಷ್ಟು;(ಜಿಲ್ಲಾವಾರು ಮತ್ತು ತಾಲ್ಲೂಕುವಾರು ಆಸ್ಪತ್ರೆಗಳ ಮಾಹಿತಿಯೊಂದಿಗೆ ವಿವರ ಒದಗಿಸುವುದು)	ವೈದ್ಯಕೀಯ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ 17 ಸರ್ಕಾರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿದ್ದು, ಅವು ಈ ಕೆಳಕಂಡಂತಿವೆ. 1. ಬೆಂಗಳೂರು ವೈದ್ಯಕೀಯಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು 2. ಬೌರಿಂಗ್ ಅಂಡ್ ಲೇಡಿಕರ್ಜನ್ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು 3. ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಮೈಸೂರು 4. ಮಂಡ್ಯವೈದ್ಯಕೀಯ ವಿಜ್ಞಾನ ಸಂಸ್ಥೆ, ಮಂಡ್ಯ 5. ಕರ್ನಾಟಕ ವೈದ್ಯಕೀಯ ವಿಜ್ಞಾನ ಸಂಸ್ಥೆ, ಹುಬ್ಬಳಿ 6. ವಿಜಯನಗರ ವೈದ್ಯಕೀಯ ವಿಜ್ಞಾನ ಸಂಸ್ಥೆ, ಬಳ್ಳಾರಿ 7. ಶಿವಮೊಗ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಶಿವಮೊಗ್ಗ 8. ಬೆಳಗಾವಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೆಳಗಾವಿ 9. ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ರಾಯಚೂರು 10. ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾಸನ 11. ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್ 12. ಗುಲ್ಬರ್ಗಾ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗುಲ್ಬರ್ಗಾ 13. ಚಾಮರಾಜನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಚಾಮರಾಜನಗರ 14. ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕೊಡಗು. 15. ಕಾರವಾರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕಾರವಾರ. 16. ಕೊಪ್ಪಳ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕೊಪ್ಪಳ 17. ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗದಗ

ಮೇಲ್ಕಂಡ ವೈದ್ಯಕೀಯ ಕಾಲೇಜುಗಳು ರಾಜ್ಯ ಸರ್ಕಾರದಿಂದ ನೀಡಲ್ಪಡುವ ಸಹಾಯಾನುದಾನದಿಂದ ಕಾರ್ಯನಿರ್ವಹಿಸುತ್ತಿವೆ. ಸದರಿ ವೈದ್ಯಕೀಯ ಕಾಲೇಜುಗಳಿಗೆ ಎಂ.ಸಿ.ಐ ಮಾರ್ಗಸೂಚಿಯನುಸಾರ ಕಾಲಕಾಲಕ್ಕೆ ಅಗತ್ಯವಿರುವ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿರುತ್ತದೆ.

ಮುಂದುವರೆದು, ಮೇಲ್ಕಂಡ ವೈದ್ಯಕೀಯ ಕಾಲೇಜುಗಳು ಸ್ವಾಯತ್ತ ಸ್ಥಾನ ಮಾನವನ್ನು ಹೊಂದಿದ್ದು, ಸಂಸ್ಥೆಗಳಲ್ಲಿ ಲಭ್ಯವಿರುವ ಆಂತರಿಕ ಸಂಪನ್ಮೂಲಗಳಿಂದಲೂ ಸಹ ಮೂಲಭೂತ ಸೌಕರ್ಯಗಳನ್ನು ಕೈಗೊಳ್ಳಲಾಗಿರುತ್ತದೆ.

ರಾಜ್ಯದಲ್ಲಿ ಕೋವಿಡ್-19 ಸೋಂಕು ಹರಡುವಿಕೆಗೆ ಪ್ರಾರಂಭಗೊಂಡ ನಂತರ ಮೇಲ್ಕಂಡ ಸರ್ಕಾರಿ ಸ್ವಾಯತ್ತ ವೈದ್ಯಕೀಯ ಕಾಲೇಜುಗಳ ಬೋಧನಾ ಆಸ್ಪತ್ರೆಗಳನ್ನು ಕೋವಿಡ್ ಆಸ್ಪತ್ರೆಗಳನ್ನಾಗಿ ಪರಿವರ್ತಿಸಲಾಗಿರುತ್ತದೆ.

ಮೇಲ್ಕಂಡ ವೈದ್ಯಕೀಯ ಕಾಲೇಜುಗಳ ಬೋಧನಾ ಆಸ್ಪತ್ರೆಗಳಲ್ಲಿ ಕೋವಿಡ್-19 ರೋಗ ಪ್ರಾರಂಭಗೊಂಡ ದಿನಾಂಕದಿಂದ ಇಲ್ಲಿಯವರೆಗೆ ಮೂಲಭೂತ ಸೌಕರ್ಯಕ್ಕಾಗಿ ಮಂಜೂರು ಮಾಡಲಾದ ಹಾಗೂ ಖರ್ಚು ಮಾಡಲಾದ ಅನುದಾನದ ವಿವರಗಳು ಈ ಕೆಳಕಂಡಂತಿದೆ.

1. ಕೋವಿಡ್-19 ಸಾಂಕ್ರಾಮಿಕ ರೋಗಕ್ಕೆ ತುತ್ತಾಗುವ ರೋಗಿಗಳಿಗೆ ಸೂಕ್ತ ಚಿಕಿತ್ಸೆಯನ್ನು ಒದಗಿಸಲು ಅನುವಾಗುವಂತೆ ವೈದ್ಯಕೀಯ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಸ್ವಾಯತ್ತ ವೈದ್ಯಕೀಯ ಕಾಲೇಜುಗಳ ಬೋಧನಾ ಆಸ್ಪತ್ರೆಗಳಲ್ಲಿ ಹೈ-ಫ್ಲೋ ಆಕ್ಸಿಜನ್ ಯೂನಿಟ್ ಗಳೊಂದಿಗೆ ಮೆಡಿಕಲ್ ಗ್ಯಾಸ್ ಪೈಪ್‌ಲೈನ್ ಹಾಗೂ ಸಿವಿಲ್ ಮತ್ತು ಎಲೆಕ್ಟ್ರಿಕಲ್ ಕಾಮಗಾರಿಗಳನ್ನು ಅಂದಾಜು ವೆಚ್ಚ ರೂ.57.17 ಕೋಟಿಗಳ ಮೊತ್ತದಲ್ಲಿ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಸದರಿ ಕಾಮಗಾರಿಯು ಚಾಲನೆಯಲ್ಲಿರುತ್ತದೆ.

2. ಸರ್ಕಾರಿ ವೈದ್ಯಕೀಯ ಸ್ವಾಯತ್ತ ಸಂಸ್ಥೆಗಳ ಪ್ರಯೋಗಾಲಯಗಳಲ್ಲಿ ಕೋವಿಡ್-19 ಪರೀಕ್ಷಾ ಸಾಮರ್ಥ್ಯವನ್ನು ಹೆಚ್ಚಿಸಲು ಅವಶ್ಯವಿರುವ RTPCR Lab ಉಪಕರಣಗಳನ್ನು ಒಟ್ಟಾರೆ ಅಂದಾಜು ವೆಚ್ಚ ರೂ.16.15 ಕೋಟಿಗಳ ಮೊತ್ತದಲ್ಲಿ ಖರೀದಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ. ಈ ಮೊತ್ತದಲ್ಲಿ ಉಪಕರಣಗಳನ್ನು ಖರೀದಿಸಲು

		ಈಗಾಗಲೇ ಸರಬರಾಜು ಆದೇಶ ನೀಡಲಾಗಿರುತ್ತದೆ. 3. ಕೋವಿಡ್-19 ನಿರ್ವಹಣೆಗಾಗಿ ವೈದ್ಯಕೀಯ ಕಾಲೇಜುಗಳಿಗೆ ಅವಶ್ಯವಿರುವ ICU ಉಪಕರಣಗಳನ್ನು ಖರೀದಿಸಲು ತಗಲುವ ಅಂದಾಜು ವೆಚ್ಚ ರೂ.94.81 ಕೋಟಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ. 4. ಕೋವಿಡ್-19 ಸೋಂಕಿನಿಂದ ಭಾದಿತರಾಗಿದ್ದ ರೋಗಿಗಳಿಗೆ ಸೂಕ್ತ ಚಿಕಿತ್ಸೆಯನ್ನು ಒದಗಿಸಲು ಅನುವಾಗುವಂತೆ ರೂ.33.00 ಕೋಟಿ ವೆಚ್ಚದ ವೈದ್ಯಕೀಯ ಸಲಕರಣೆಗಳು/ ಪರಿಕರಗಳನ್ನು ಖರೀದಿಸಿರುವುದಕ್ಕೆ ಘಟನೋತ್ತರ ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಈ ಅನುದಾನವನ್ನು ಈಗಾಗಲೇ ಸಂಪೂರ್ಣವಾಗಿ ಉಪಯೋಗಿಸಿಕೊಳ್ಳಲಾಗಿರುತ್ತದೆ.

ಸಂಖ್ಯೆ: ಎಂಇಡಿ 329 ಎಂಪಿಎಸ್ 2020

(ಡಾ: ಕೆ. ಸುಧಾಕರ್)
ವೈದ್ಯಕೀಯ ಶಿಕ್ಷಣ ಸಚಿವರು.